## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಕೀರ್ತಿ ಹೆಚ್. ಅಧ್ಯಕ್ಷರು, ಬಡವನಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ರವರ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು – ಆದೇಶ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018, ದಿನಾಂಕ: 02.02.2019.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ರವರ ಪತ್ರ ಸಂಖ್ಯೆ: ಗ್ರಾಅಪ 202 ಗ್ರಾಪಂಅ 2019, ದಿನಾಂಕ:26.04.2019.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ರವರು ಪತ್ರ ಸಂಖ್ಯೆ:ತುಜಿಪ/ಅಭಿ/ವಿವ–3/ಅವ್ಯವಹಾರ/289/2018–19, ದಿನಾಂಕ:28.01.2019.
4. ಪ್ರಾದೇಶಿಕರ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ಪತ್ರ ಸಂಖ್ಯೆ: ಪ್ರಾಆಕ/ಅಭಿವೃದ್ಧಿ/ಸಿಆರ್/26/2019–20, ದಿನಾಂಕ:19.12.2019.

**ಪ್ರಸ್ತಾವನೆ:**

ಶ್ರೀಮತಿ ಕೀರ್ತಿ ಹೆಚ್. ಅಧ್ಯಕ್ಷರು, ಬಡವನಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ರವರು ಬಡವನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಾಡಿರುವ ಅವ್ಯವಹಾರಗಳ ಬಗ್ಗೆ ಉಲ್ಲೇಖ (1) ಮತ್ತು (2) ರ ಆದೇಶಗಳ ಸೂಚನೆಯಂತೆ ವಿಚಾರಣೆ ನಡೆಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿತ್ತು. ಅದರಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ರವರು ಆರೋಪಿತ ಸದಸ್ಯರ ವಿರುದ್ಧ ಇದಂತಹ ಆರೋಪಗಳ ಬಗ್ಗೆ ವಿಚಾರಣೆ ಮಾಡಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 48(5) ರನ್ವಯ ಕ್ರಮ ಜರುಗಿಸುವಂತೆ ಮೇಲೆ ಓದಲಾದ (3) ರ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ (4) ರಲ್ಲಿ ಓದಲಾದ ಪತ್ರದಲ್ಲಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಹಾಗೂ ವಿಚಾರಣಾಧಿಕಾರಿಗಳು ಇವರು ವಿಚಾರಣಾ ವರದಿಯಲ್ಲಿ ಶ್ರೀಮತಿ ಕೀರ್ತಿ ಹೆಚ್. ರವರು 2017–18ನೇ ಸಾಲಿನ 14ನೇ ಹಣಕಾಸು ಯೋಜನೆಯ ಎರಡನೇ ಕಂತಿನ ಅನುದಾನ ರೂ.12,69,900/–ಕ್ಕೆ ಕ್ರಿಯಾ ಯೋಜನೆ ಅನುಮೋದನೆ ಪಡೆಯುವುದಕ್ಕಿಂತ ಮುಂಚಿತವಾಗಿ ನಿಯಮಾ ಬಾಹಿರವಾಗಿ ರೂ.2,84,972/–ಗಳನ್ನು ಖರ್ಚು ಮಾಡಿರುವ ಬಗ್ಗೆ ಹಾಗೂ ಅಧಿಕಾರ ದುರುಪಯೋಗ ಪಡಿಸಿಕೊಂಡಿರುವ ಆರೋಪಗಳ ಬಗ್ಗೆ ದಿನಾಂಕ:13.09.2019 ರಂದು ವಿಚಾರಣೆ ಮಾಡಲಾಗಿದ್ದು, ಸದರಿಯವರು ವಿಚಾರಣೆಗೆ ಹಾಜರಾಗಿ ಈಗಾಗಲೇ ಲಿಖಿತ ಹೇಳಿಕೆಗಳನ್ನು ದಿನಾಂಕ:03.07.2019 ರಂದು ನೀಡಿರುವುದಾಗಿ, ಹೇಳಿಕೆ ನೀಡಿರುತ್ತಾರೆ.

ಆರೋಪಿತ ಅಧ್ಯಕ್ಷರ ಹೇಳಿಕೆಗಳನ್ನು ಲಭ್ಯವಿರುವ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಲಾಗಿ, 14ನೇ ಹಣಕಾಸು ಯೋಜನೆಯ ಕ್ರಿಯಾ ಯೋಜನೆ ಅನುಮೋದನೆ ಪಡೆಯುವುದಕ್ಕೆ ಮುಂಚಿತವಾಗಿ ನಿಯಮ ಬಾಹಿರವಾಗಿ ರೂ.2,84,972/–ಗಳನ್ನು ಖರ್ಚು ಮಾಡಿರುವ ಬಗ್ಗೆ ಸೂಕ್ತ ಸಮಜಾಯಿಷಿಯನ್ನು ನೀಡಿರುವುದಿಲ್ಲ. 2016–17ನೇ ಸಾಲಿನ ಮೂರನೇ ಕಂತಿನ ಅನುದಾನ ಕ್ರಿಯಾ ಯೋಜನೆಯಲ್ಲಿ ಅನುಮೋದನೆಗೊಂಡ ಬಡವನಹಳ್ಳಿ ಹೊಸ ಬಡಾವಣೆಯ ಜಿ.ಆರ್. ರಂಗಪ್ಪನವರ ಮನೆಯಿಂದ ಕೆ.ಎಂ. ಬಸವರಾಜು ಮನೆವರೆಗೆ ಚರಂಡಿ ನಿರ್ಮಾಣ ಕಾಮಗಾರಿಗೆ ಬದಲಾಗಿ ಬೇರೊಂದು ಕಾಮಗಾರಿ ನಿರ್ವಹಿಸಿದ್ದು, ಕಾಮಗಾರಿ ಬದಲಾವಣೆ ಮಾಡಿ ಅನುಷ್ಠಾನಗೊಳಿಸುವ ಸಂಬಂಧ ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದನೆ ಪಡೆದಿರುವ ಬಗ್ಗೆ ದಾಖಲೆ ಹಾಜರುಪಡಿಸಿರುವುದಿಲ್ಲ. ರೂ. 72,000/–ಗಳ ವೆಚ್ಚದಲ್ಲಿ 2000 ಪ್ಲಾಸ್ಟಿಕ್ ಡಸ್ಟ್‌ಬಿನ್‌ಗಳನ್ನು

ಖರೀದಿಸಿದ್ದು, ಸದರಿ ಸಾಮಾಗ್ರಿಗಳನ್ನು ಇದುವರೆವಿಗೂ ನಿರ್ದಿಷ್ಟ ಉಪಯೋಗಕ್ಕೆ ಬಳಕೆ ಮಾಡಿರುವುದಿಲ್ಲ. ಸ್ಥಾಯಿ ಸಮಿತಿ, ಗ್ರಾಮ ಪಂಚಾಯಿತಿ ಸಭೆಗಳನ್ನು ನಿಗಧಿತ ಅವಧಿಯೊಳಗೆ ನಡೆಸದೇ ಇರುವುದು ಕಂಡು ಬಂದಿರುತ್ತದೆ. ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸರ್ಕಾರದ ಮಾರ್ಗಸೂಚಿಯಂತೆ ಖರ್ಚು ಮಾಡುವ ಕ್ರಮವಹಿಸಿರುವುದಿಲ್ಲ. ಸದರಿಯವರ ಮೇಲಿರುವ ಆರೋಪಗಳಿಗೆ ಸಂಬಂಧಿಸಿದಂತೆ ಸಮರ್ಥಿಸುವ ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ. ಈಗಾಗಿ ಇವರ ಸಮಜಾಯಿಷಿಯನ್ನು ಒಪ್ಪಲು ಸಾಧ್ಯವಿಲ್ಲ ಮೇಲಾಗಿ ಇವರೊಬ್ಬ ಚುನಾಯಿತಿ ಸದಸ್ಯರಾಗಿದ್ದು, ಜವಾಬ್ದಾರಿಯುತವಾಗಿ ಹಾಗೂ ಪಾರದರ್ಶಕವಾಗಿ ತಮ್ಮ ಕರ್ತವ್ಯಗಳನ್ನು ನಿಬಾಯಿಸದೇ ಇರುವ ಆರೋಪಗಳು ಸಾಬೀತಾಗಿದ್ದು, ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 48(5) ರನ್ವಯ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತೆಗೆದು ಹಾಕಲು ಸರ್ಕಾರವು ತೀರ್ಮಾನಿಸಿದೆ.

ಅದರಂತೆ, ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/76/ಗ್ರಾಪಂಅ/2020**
**ಬೆಂಗಳೂರು, ದಿನಾಂಕ:18-02-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಕೀರ್ತಿ ಹೆಚ್. ಅಧ್ಯಕ್ಷರು, ಬಡವನಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ರವರ ವಿರುದ್ಧದ ಆರೋಪಗಳು ಸಾಬೀತಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 48(5) ರನ್ವಯ ಸದರಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 18/2/2020
(ನವೀನ್‌ಕುಮಾರ್ ಬಿ.)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

18.2.2020

**ಗೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮಧುಗಿರಿ, ತುಮಕೂರು ಜಿಲ್ಲೆ.
3) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಡವನಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
4) ಸಂಬಂಧಿಸಿದವರಿಗೆ (ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮಧುಗಿರಿ, ತುಮಕೂರು ಜಿಲ್ಲೆ ರವರ ಮುಖಾಂತರ)
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.